# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 298 |
| 2. | ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ .ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : | 29.01.2026 |
| 4. | ಉತ್ತರಿಸುವ ಸಚಿವರು | : | ಗೃಹ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಮಾದಕ ವಸ್ತುಗಳ ತಯಾರಿಕೆ, ಬಳಕೆ, ಸಂಗ್ರಹ ಮತ್ತು ಕಳ್ಳಸಾಗಣೆ ಅವ್ಯಾಹತವಾಗಿ ಮತ್ತು ನಿರಂತರವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿರುತ್ತದೆ. |
| (ಆ) | ಬಂದಿದ್ದಲ್ಲಿ, ಅನೇಕ ಯುವಕ, ಯುವತಿಯರು ಮಾದಕ ವ್ಯಸನದ ಸುಳಿಗೆ ಸಿಲುಕಿ ತಮ್ಮ ಜೀವನ ಹಾಳು ಮಾಡಿಕೊಳ್ಳುತ್ತಿದ್ದರೂ ಸರ್ಕಾರವು ಡ್ರಗ್ ಮಾಫಿಯಾವನ್ನು ತಡೆಗಟ್ಟಲು ಸಂಪೂರ್ಣವಾಗಿ ವಿಫಲವಾಗಿದೆ ಎನ್ನುವ ಅಸಮಾಧಾನ ಹಲವಾರು ಪೋಷಕರಲ್ಲಿ ಇದ್ದು, ಡ್ರಗ್ ಮಾಫಿಯಾವನ್ನು ತಡೆಗಟ್ಟಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು: | ರಾಜ್ಯದಲ್ಲಿ ಮಾದಕ ದ್ರವ್ಯಗಳ ಹಾವಳಿಯನ್ನು ಎದುರಿಸಲು ಹಾಗೂ ತಡೆಗಟ್ಟಲು ಮಾದಕ ದ್ರವ್ಯ ವಿರೋಧಿ ಕಾರ್ಯಪಡೆ (ಎ.ಎನ್.ಟಿ.ಎಫ್) ಯನ್ನು ಎಡಿಜಿಪಿ ಹುದ್ದೆಯ ನೇತೃತ್ವದಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 141 ಪಿಓಪಿ 2024, ದಿನಾಂಕ: 01/08/2025 ರಂದು ಸ್ಥಾಪಿಸಲಾಗಿದೆ. ಅದರಂತೆ ಕಾರ್ಯಪಡೆಯು ಕಾರ್ಯ ನಿರ್ವಹಿಸುತ್ತಿದೆ.<br>ರಾಜ್ಯದಲ್ಲಿ ಮಾದಕ ವಸ್ತುಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿದೆ:-<br>➢ ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾನಿರೀಕ್ಷಕರ ಕಛೇರಿಯ ಸ್ಥಾಯಿ ಆದೇಶ ಸಂಖ್ಯೆ: 1047 ರಲ್ಲಿ ಮಾದಕ ವಸ್ತು ಮತ್ತು ಅದರ ವ್ಯಸನದ ವಿರುದ್ಧ ಜಾಗೃತಿ ಅಭಿಯಾನಗಳನ್ನು ನಡೆಸಲು ಎಲ್ಲಾ ಘಟಕಗಳಿಗೆ ಸೂಚಿಸಲಾಗಿದೆ.<br>➢ ಎನ್.ಡಿ.ಪಿ.ಎಸ್. ಕಾಯ್ದೆ-1985ರಡಿಯಲ್ಲಿ ದಾಖಲಾದ ಪ್ರಕರಣಗಳ ತನಿಖೆಯ ಸಂಬಂಧ ಸ್ಥಾಯಿ ಆದೇಶ ಸಂಖ್ಯೆ: 1048 ರಲ್ಲಿ ಎಲ್ಲಾ ತನಿಖಾಧಿಕಾರಿಗಳಿಗೆ ಅಗತ್ಯ ಕ್ರಮ ವಹಿಸುವಂತೆ ಸೂಚಿಸಲಾಗಿದೆ.<br>➢ ಮಾದಕ ವಸ್ತು ಸೇವನ ಮತ್ತು ಮಾರಾಟ ಸಂಬಂಧ ಪೊಲೀಸ್ ಠಾಣಾ ಮಟ್ಟದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸ್ಥಾಯಿ ಆದೇಶ ಸಂಖ್ಯೆ:1051ರಲ್ಲಿ ನಿರ್ದೇಶಗಳನ್ನು ನೀಡಲಾಗಿದೆ.<br>➢ ಮಾದಕ ದ್ರವ್ಯ ಮುಕ್ತ ಕರ್ನಾಟಕ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಸನ್ಮಿತ್ರ ಉಪಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವ ಬಗ್ಗೆ ಸ್ಥಾಯಿ ಆದೇಶ ಸಂಖ್ಯೆ: 1052 ರಲ್ಲಿ ಮಾರ್ಗದರ್ಶನ ನೀಡಲಾಗಿದೆ.<br>➢ NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ-National Integrated Data Base on Arrested Narco Offenders-NIDAAN ಪೋರ್ಟಲ್‌ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ |

ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.

- ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ NCORD (Narcotics Co-ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.
- ಎನ್‌ಡಿಪಿಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಭಾಗಿಯಾಗುವ ಆರೋಪಿಗಳನ್ನು ವಿದೇಶಿ ಪ್ರಜೆಗಳ ಕಾಯ್ದೆಯಡಿಯಲ್ಲಿ ಗಡಿಪಾರು ಪ್ರಕ್ರಿಯೆ ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.
- ರಾಜ್ಯದ ಯುವಕರಲ್ಲಿ ಮಾದಕ ವಸ್ತು ಬಳಕೆ ಹೆಚ್ಚುತ್ತಿರುವ ಬಗ್ಗೆ ಡ್ರಗ್ಸ್ ಹಾವಳಿಯನ್ನು ಪೂರ್ಣವಾಗಿ ತಡೆಗಟ್ಟಲು ಶಾಲಾ-ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿರುತ್ತದೆ.
- ಪೊಲೀಸ್ ಠಾಣೆಗಳಲ್ಲಿ ನಿಯಮಿತವಾಗಿ ಜಾಗೃತಿ ಕಾರ್ಯಕ್ರಮಗಳನ್ನು, ಶಾಲಾ-ಕಾಲೇಜುಗಳಲ್ಲಿ ಗಾಂಜಾ ಸೇವನೆಯಿಂದ ಆಗುವ ದುಷ್ಪರಿಣಾಮಗಳ, ಗಾಂಜಾ ಬೆಳೆಯನ್ನು ಬೆಳೆಯುವುದು ಮತ್ತು ಮಾರಾಟ ಮಾಡುವುದು ಕಾನೂನಾತ್ಮಕ ಅಪರಾಧವಾಗಿರುತ್ತದೆ ಎಂಬ ಬಗ್ಗೆ ಹಾಗೂ ಅದರಿಂದಾಗುವ ಶಿಕ್ಷೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಮಾಡಲಾಗಿರುತ್ತದೆ.
- ಮಾದಕ ದ್ರವ್ಯಗಳ ಅಕ್ರಮ ಸಾಗಾಣಿಕೆ ಮತ್ತು ಮಾದಕ ದ್ರವ್ಯ ಜಾಲ ಕುರಿತು ಸ್ಥಳೀಯ ಬಾತ್ಮೀದಾರರು, ಅಪರಾಧ ವಿಭಾಗದ ಸಿಬ್ಬಂದಿಗಳು ಹಾಗೂ ಬೀಟ್ ಸಿಬ್ಬಂದಿಗಳಿಂದ ಮಾಹಿತಿ ಕಲೆ ಹಾಕಲಾಗುತ್ತಿದೆ. ಪೊಲೀಸ್ ಠಾಣೆಗಳಲ್ಲಿ ಮಾದಕ ದ್ರವ್ಯಗಳ ಅಕ್ರಮ ಸಾಗಾಣಿಕೆ ಬಗ್ಗೆ ವಿಶೇಷವಾಗಿ ಮಾಹಿತಿಯನ್ನು ಸಂಗ್ರಹಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.
- ಮಾದಕ ವಸ್ತು ಮಾರಾಟ & ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂ: 1933 ಯೋಜನೆಯನ್ನು ಪ್ರಾರಂಭಿಸಿರುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲಾಗಿದೆ.
- ನಗರ ಮಟ್ಟದಲ್ಲಿ "Zero Narcotics" ಘೋಷಣೆ ಶಾಲಾ-ಕಾಲೇಜುಗಳು, PG/Hostels, ಮಾಲ್‌ಗಳ ಸುತ್ತಮುತ್ತ ನಿರಂತರ ನಿಗಾವಣೆ Special Narcotics Squad ನಿಯೋಜಿಸಲಾಗಿದೆ.
- ಪ್ರತಿ ತಿಂಗಳು ಶಾಲಾ-ಕಾಲೇಜುಗಳು ಮತ್ತು ಸಾರ್ವಜನಿಕ ಸ್ಥಳಗಳಿಗೆ ಭೇಟಿ ನೀಡಿ ಮಾದಕ ವಸ್ತುಗಳ ಸೇವನೆಯಿಂದ ಆಗುವ

| | | |
|---|---|---|
| | | ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿರುತ್ತದೆ.<br>➢ ಸಂಶಯಾಸ್ಪದ ಹೈಸೆಕ್ಯುರಿಟಿ ಸ್ಥಳಗಳಲ್ಲಿ ಬಿಗಿ ನಿಗಾವಣೆ ಇಡಲಾಗಿದೆ. ಪಾರ್ಸಲ್ ಸರ್ವೀಸ್, ಕೊರಿಯರ್ ಸೆಂಟರ್, ರೆಸಾರ್ಟ್/ಫಾರ್ಮ್ ಹೌಸ್ ಗಳಿಗೆ Surprise Inspections (ದಿಢೀರ್ ಭೇಟಿ) ಕೈಗೊಂಡು ನಗರ ಹೊರವಲಯಗಳಲ್ಲಿ ಡ್ರಗ್ಸ್ ಪಾರ್ಟಿಗಳನ್ನು ತಡೆಗಟ್ಟುವ ಬಗ್ಗೆ ವಿಶೇಷ ಪೆಟ್ರೋಲಿಂಗ್ ನಡೆಸಲಾಗಿರುತ್ತದೆ.<br>➢ ಪ್ರತಿ ಮಾಹೆಯಲ್ಲಿ ಜಿಲ್ಲಾ ಮಟ್ಟದ NCORD ಸಮಿತಿ ಸಭೆಗಳನ್ನು ನಡೆಸಲು ಎಲ್ಲಾ ಘಟಕಾಧಿಕಾರಿಗಳಿಗೆ ತಿಳಿಸಲಾಗಿರುತ್ತದೆ.<br>➢ ಪ್ರತಿ ವರ್ಷ ಜೂನ್ 26 ರಂದು "ಮಾದಕ ವಸ್ತುಗಳ ನಿಗ್ರಹ ದಿನ"ವನ್ನು ಆಚರಣೆ ಮಾಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>➢ ಮಾದಕ ವಸ್ತು ಮಾರಾಟ ಉತ್ಪಾದನೆ ಬಗ್ಗೆ ಅನುಮಾನಾಸ್ಪದ ವ್ಯಕ್ತಿಗಳು ಕಂಡುಬಂದಲ್ಲಿ ಎನ್.ಡಿ.ಪಿ.ಎಸ್. ಕಾಯ್ದೆ-1985ರಡಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ವಿ.ಸಿ. ಮೂಲಕವು ಸಹ ಎಲ್ಲಾ ಘಟಕಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. |
| (ಇ) | ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಉನ್ನತ ಹಾಗೂ ವೃತ್ತಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳು ಬಹಳ ಸುಲಭವಾಗಿ ವ್ಯಾಪಕವಾಗಿ ಮತ್ತು ನಿರಂತರವಾಗಿ ಸಿಗುತ್ತಿವೆ ಎಂಬ ಮಾತುಗಳು ಪದೇ ಪದೇ ಕೇಳಿ ಬರುತ್ತಿದ್ದು, ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: | ದಕ್ಷಿಣ ಕನ್ನಡ ಜಿಲ್ಲೆಯ ವಿವಿಧ ಉನ್ನತ ಹಾಗೂ ವೃತ್ತಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳು ಬಹಳ ಸುಲಭವಾಗಿ ವ್ಯಾಪಕವಾಗಿ ಮತ್ತು ನಿರಂತರವಾಗಿ ಸಿಗುತ್ತಿವೆ ಎಂಬ ಮಾತುಗಳು, ಪದೇ ಪದೇ ಕೇಳಿ ಬರುತ್ತಿದ್ದು, ಇದನ್ನು ತಡೆಯಲು ಸರ್ಕಾರವು ತೆಗೆದುಕೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿವೆ:-<br>• ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಕಾಲೇಜು/ ವೃತ್ತಿ ಶಿಕ್ಷಣ ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಮಾದಕ ವಸ್ತುಗಳ ಸೇವನೆ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.<br>• ಮಾದಕ ವಸ್ತು ಸೇವನೆ ಅಥವಾ ಮಾರಾಟ ಮಾಡುತ್ತಿರುವವರ ಮಾಹಿತಿಯನ್ನು ನೀಡುವಂತೆ ಕ್ಯೂ ಆರ್ ಕೋಡ್ ನ್ನು ರಚಿಸಿ ಎಲ್ಲಾ ಶಾಲಾ-ಕಾಲೇಜುಗಳಿಗೆ ಹಂಚಿಕೆ ಮಾಡಲಾಗಿದೆ.<br>• ಕ್ಯೂ ಆರ್ ಕೋಡ್ ನಲ್ಲಿ ದೂರು ನೀಡಿರುವವರ ಮಾಹಿತಿಯನ್ನು ಗೌಪ್ಯವಾಗಿ ಇಡಲಾಗುತ್ತಿದೆ. ಕ್ಯೂ ಆರ್ ಕೋಡ್ ನಲ್ಲಿ ಬಂದಂತಹ ದೂರುಗಳನ್ನು ಪರಿಶೀಲಿಸಿ, ಮಾದಕ ವಸ್ತು ಮಾರಾಟ ಮಾಡುವವರನ್ನು ಪತ್ತೆ ಮಾಡಿ ಕ್ರಮಕೈಗೊಳ್ಳಲಾಗುತ್ತಿದೆ.<br>• ಶಾಲಾ-ಕಾಲೇಜುಗಳ ಪರಿಸರದಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ರೌಂಡ್ಸ್ ಕರ್ತವ್ಯವನ್ನು ಮಾಡುತ್ತಿದ್ದು, ಸದರಿ ಪರಿಸರದಲ್ಲಿರುವ ಅಂಗಡಿಗಳ ಬಗ್ಗೆ ಗುಪ್ತವಾಗಿ ನಿಗಾ ಇಡಲಾಗುತ್ತಿದೆ. |

| | | |
|---|---|---|
| | | • ಮಾದಕ ದ್ರವ್ಯದಿಂದ ಉಂಟಾಗುವ ಪರಿಣಾಮಗಳ ಬಗ್ಗೆ ಅರಿವು ಕಾರ್ಯಗಾರವನ್ನು ಮತ್ತು ಜಾಗೃತಿ ಮೆರವಣಿಗೆಗಳನ್ನು ಆಯಾ ಠಾಣಾ ವ್ಯಾಪ್ತಿಯಲ್ಲಿ ನಡೆಸಲಾಗುತ್ತಿದೆ.<br>ದಕ್ಷಿಣ ಕನ್ನಡ ಜಿಲೆಯಲ್ಲಿ ಮಾದಕ ವಸ್ತು ವಿರೋಧಿ ಕಾರ್ಯಪಡೆ (Anti Narcotics task Force-ANTE) ಎಂಬ ಸಂಯೋಜನಾ ಘಟಕವನ್ನು ರಚಿಸಲಾಗಿದೆ. ಈ ಕಾರ್ಯಪಡೆಗೆ ಓರ್ವ ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ಓರ್ವ ಪೊಲೀಸ್ ಉಪಾಧೀಕ್ಷಕರು ಹಾಗೂ ಮೂವರು ಪೊಲೀಸ್ ನಿರೀಕ್ಷಕರನ್ನು ನೇಮಿಸಲಾಗಿದೆ. |
| (ಈ) | ಕಳೆದ 3 ವರ್ಷಗಳಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡ್ರಗ್ಸ್ ಕಳ್ಳಸಾಗಣೆ ಮತ್ತು ಮಾರಾಟದ ಎಷ್ಟು ಪ್ರಕರಣಗಳು ದಾಖಲಾಗಿವೆ ಮತ್ತು ಆ ಪ್ರಕರಣಗಳಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: ಸದರಿ ಪ್ರಕರಣಗಳಲ್ಲಿ ಎಷ್ಟು ಡ್ರಗ್ಸ್ ಪೆಡ್ಲರ್ಸ್‌ಗಳಿಗೆ ಇದುವರೆಗೆ ಶಿಕ್ಷೆ ಆಗಿದೆ? (ವಿವರ ನೀಡುವುದು) | ಕಳೆದ 3 ವರ್ಷಗಳಲ್ಲಿ ಮಂಗಳೂರು ನಗರದಲ್ಲಿ ಮಾದಕ ವಸ್ತು ಬಳಕೆದಾರರ ವಿರುದ್ಧ 2272, ಮಾರಾಟಗಾರರ ವಿರುದ್ಧ 307 ಪ್ರಕರಣಗಳು ದಾಖಲಾಗಿರುತ್ತವೆ.<br>ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಡ್ರಗ್ಸ ಮಾರಾಟಗಾರರ ವಿರುದ್ಧ 52 ಪ್ರಕರಣಗಳು ದಾಖಲಾಗಿರುತ್ತವೆ. 07 ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಶಿಕ್ಷೆಯಾಗಿರುತ್ತದೆ. ಅಂಕಿ-ಅಂಶಗಳ ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ. |

ಒಇ 10 ಪಿಎನ್‌ಡಿ 2026 (ಇ)

(ಡಾ: ಜಿ . ಪರಮೇಶ್ವರ)
ಗೃಹ ಸಚಿವರು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: ೨೧೪.

## ಅನುಬಂಧ

| ವರ್ಷ | ಘಟಕ | ಮಾದಕ ವಸ್ತುಗಳ ತಯಾರಿಕೆಗಾರರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ | ಮಾದಕ ವಸ್ತುಗಳ ಬಳಕೆದಾರರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ | ಮಾದಕ ವಸ್ತುಗಳ ಸಂಗ್ರಹಗಾರರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ | ಮಾದಕ ವಸ್ತುಗಳ ಮಾರಾಟಗಾರರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ | ಮಾದಕ ವಸ್ತುಗಳ ಕಳ್ಳಸಾಗಾಣಿಕೆ ಪ್ರಕರಣಗಳ ಸಂಖ್ಯೆ | ಡ್ರಗ್ಸ್ ಪೆಡ್ಲರ್ಸ್‌ಗಳಿಗೆ ಶಿಕ್ಷೆ ಆಗಿರುವ ಪ್ರಕರಣಗಳ ಸಂಖ್ಯೆ |
|---|---|---|---|---|---|---|---|
| 2023 | ಪೊಲೀಸ್ ಆಯುಕ್ತರು, ಮಂಗಳೂರು ನಗರ | 0 | 619 | 0 | 94 | 0 | 0 |
| 2024 | | 0 | 1026 | 0 | 88 | 0 | 0 |
| 2025 | | 0 | 601 | 0 | 116 | 0 | 0 |
| 2026 (15-01-2026) | | 0 | 26 | 0 | 9 | 0 | 0 |
| 2023 | ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು | 0 | 0 | 0 | 21 | 0 | 03 |
| 2024 | | 0 | 0 | 0 | 12 | 0 | 04 |
| 2025 | | 0 | 0 | 0 | 16 | 0 | 00 |
| 2026 (15-01-2026) | | 0 | 0 | 0 | 03 | 0 | 00 |
| **ಒಟ್ಟು** | | **0** | **2272** | **0** | **359** | **0** | **7** |